**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.118/2019**

| | | | |
|---|---|---|---|
| ಸಾಕ್ಷಿದಾರರ ಹೆಸರು | ಅಶೋಕ ಸುಬೇದಾರ | ಸಿಡಬ್ಲ್ಯೂ | 12 |
| ತಂದೆಯ ಹೆಸರು | ಪರಶುರಾಮ | ಪಿಡಬ್ಲ್ಯೂ | 7 |
| ವಯಸ್ಸು | 67 ವರ್ಷ | | |
| ಉದ್ಯೋಗ | ನಿವೃತ್ತ ಪಿ.ಎಸ್.ಐ | | |
| ವಾಸಸ್ಥಳ | ಧಾರವಾಡ | | |

**ದಿಃ01.07.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.**

1) ನಾನು ಮಹಿಳಾ ಪೊಲೀಸ ಠಾಣೆಯಲ್ಲಿ ಎ.ಎಸ್.ಐ ಆಗಿ 2016 ರಿಂದ 2019 ರವರೆಗೆ ಆಗಿ ಸೇವೆ ಸಲ್ಲಿಸಿದ್ದೇನೆ. ದಿನಾಂಕಃ 30.06.2018 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾ.ಸಾ–1ರವರು ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿಕೊಂಡು, ದೂರಿನ ಆಧಾರದ ಮೇಲೆ ಅಪರಾಧವು ಮಹಿಳೆಯ ಮೇಲಿನ ದೌರ್ಜನ್ಯವಾದ ಪ್ರಕರಣ ಆದ ಕಾರಣ ಸದರಿ ದೂರನ್ನು ಕುಟುಂಬ ಕಲ್ಯಾಣ ಸಮಿತಿ ಹಾವೇರಿಗೆ ಕಳುಹಿಸಿಕೊಟ್ಟಿದ್ದು, ದಿನಾಂಕಃ 15.07.2018 ರಂದು ಸದರಿ ಸಮಿತಿಯಿಂದ ಪಿರ್ಯಾದುದಾರರು ಮತ್ತು ಆರೋಪಿಗಳ ನಡುವೆ ಯಾವುದೇ ರಾಜಿ ಸಂದಾನ ಆಗದ ಕಾರಣ ಪ್ರಕರಣ ದಾಖಲಿಸಿ ತನಿಖೆ ಮಾಡುವಂತೆ ಹೇಳಿದ್ದರಿಂದ ಠಾಣಾ ಗುನ್ನಾ ನಂಬರಃ 30/2018 ರಂತೆ ಪ್ರಕರಣವನ್ನು ದಾಖಲಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿದ್ದೇನೆ.

2) ದಿನಾಂಕಃ 18.07.2018 ರಂದು ಚಾ.ಸಾ-1ರವರ ಮುಂದುವರೆದ ಹೇಳಿಕೆಯನ್ನು ದಾಖಲಿಸಿಕೊಂಡಿದ್ದೇನೆ. ಅದೇ ದಿನ ಘಟನಾ ಸ್ಥಳಕ್ಕೆ ಬೇಟಿ ನೀಡಿ ಬೆಳಿಗ್ಗೆ 9-00 ರಿಂದ 10-00 ಘಂಟೆಯವರೆಗೆ ಚಾ.ಸಾ-1ರವರು ತೋರಿಸಿದ ಸ್ಥಳದಲ್ಲಿ ಚಾ.ಸಾ-2 ಮತ್ತು 3ರವರ ಸಮಕ್ಷಮ ಸ್ಥಳ ಪಂಚನಾಮೆಯನ್ನು ಜರುಗಿಸಿದ್ದೇನೆ ಹಾಗೂ ಎರಡು ಪೋಟೋಗಳನ್ನು ತೆಗೆಯಿಸಿ, ಮದುವೆಗೆ ಸಂಬಂಧಿಸಿದಂತೆ ಲಗ್ನಪತ್ರಿಕೆಯನ್ನು ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿದ್ದೇನೆ. ಮುಂದಿನ ತನಿಖೆಗಾಗಿ ಕಡತವನ್ನು ಪಿ.ಎಸ್.ಐ ರವರಾದ ಶ್ರೀಮತಿ ಎಸ್.ಹೆಚ್.ಗರಗ ಇವರಿಗೆ ವಹಿಸಿಕೊಟ್ಟಿದ್ದೇನೆ.

3) ಸ್ಥಳ ಪಂಚನಾಮೆಯನ್ನು ಈಗಾಗಲೇ ನಿ.ಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ-1(ಸಿ) ಎಂದು ಗುರುತಿಸಲಾಯಿತು. ಆ ಸಮಯದಲ್ಲಿ ತೆಗೆದ ಎರಡು ಪೋಟೋಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ನಿ.ಪಿ-2 ಮತ್ತು 3 ಎಂದು ಗುರುತಿಸಲಾಗಿರುತ್ತದೆ. ನಿ.ಪಿ-21 ಲಗ್ನಪತ್ರಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿ.ಪಿ-21(ಎ) ಎಂದು ಗುರುತಿಸಲಾಯಿತು. ದೂರನ್ನು ನಿ.ಪಿ-25 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-25(ಎ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿ.ಪಿ-26 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-26(ಎ) ಎಂದು ಗುರುತಿಸಲಾಯಿತು. ಕುಟುಂಬ ಕಲ್ಯಾಣ ಸಮಿತಿಯಿಂದ ಬಂದ ಆದೇಶದ ಪ್ರತಿಯನ್ನು ನಿ.ಪಿ-27 ಮತ್ತು 28 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-27(ಎ) ಮತ್ತು ನಿ.ಪಿ-28(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ.ಎಂ.ಸಿ.ಹೆಚ್ ವಕೀಲರಿಂದಃ ಆರೋಪಿತರ ಪರವಾಗಿಃ**

4) ನಾನು ಈ ಪ್ರಕರಣದಲ್ಲಿ ಪಿರ್ಯಾದಿಯನ್ನು ಕೊಟ್ಟಂತಹ ಪಿರ್ಯಾದಿದಾರರಿಗೆ ವಿಚಾರಣೆ ಮಾಡಿದಾಗ ಪಿರ್ಯಾದಿದಾರರು ಆರೋಪಿಗಳ ವಿರುದ್ಧ ಸುಳ್ಳು ಪಿರ್ಯಾದಿಯನ್ನು ಕೊಡುತ್ತಿದ್ದಾರೆ ಎನ್ನುವ ವಿಷಯ ಗೊತ್ತಿದ್ದರೂ ಸಹ, ನಾನು ಉದ್ದೇಶಪೂರ್ವಕವಾಗಿ ಆರೋಪಿಗಳ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಸುಳುಳ ಪ್ರ.ವ.ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೇನೆ ಅಂದರೆ ಸರಿಯಲ್ಲ. ನಾನು ಘಟನೆ ನಡೆದ ಸ್ಥಳಕ್ಕೆ ಪಂಚರ ಸಮಕ್ಷಮ ಬೇಟಿ ನೀಡಿ ಅಲ್ಲಿ ಘಟನಾ ಸ್ಥಳದ ಪಂಚನಾಮೆಯನ್ನು ಮತ್ತು ಪೋಟೋಗಳನ್ನು ತೆಗೆದಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.